ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 30 ನೇ ಸೆಪ್ಟೆಂಬರ್, 2020

ಮುಜರಾಯಿ ದೇವಸ್ಥಾನಗಳ ಬಗ್ಗೆ

ಶ್ರೀ ಎಂ. ಎ. ಗೋಪಾಲಸ್ವಾಮಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

1035 (1190) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಹಾಸನ ಜಿಲ್ಲೆಯಲ್ಲಿರುವ ಮುಜರಾಯಿ ದೇವಾಲಯಗಳ ಸಂಖ್ಯೆ ಹಾಗೂ ಇವುಗಳ ಸ್ಥಿರಾಸ್ತಿ ಎಷ್ಟು; (ತಾಲ್ಲೂಕುವಾರು ಮತ್ತು ದೇವಸ್ಥಾನವಾರು ವಿವರ ನೀಡುವುದು)

(ಆ) ಈ ದೇವಾಲಯಗಳಿಗೆ ಸಂಬಂಧಿಸಿದ ಜಮೀನುಗಳು ಒತ್ತುವರಿಯಾಗಿರುವ ಪ್ರಕರಣಗಳೆಷ್ಟು; ಈ ಒತ್ತುವರಿಯಾಗಿರುವ ಜಮೀನುಗಳನ್ನು ತೆರವುಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ಪ್ರಕರಣವಾರು ಮಾಹಿತಿ ನೀಡುವುದು)

(ಇ) ಕಳೆದ 3 ವರ್ಷಗಳಲ್ಲಿ ಹಾಸನ ಜಿಲ್ಲೆಯಲ್ಲಿರುವ ಮಜರಾಯಿ ದೇವಾಲಯಗಳಿಂದ ಸರ್ಕಾರಕ್ಕೆ ಬಂದ ಆದಾಯವೆಷ್ಟು; ಈ ದೇವಸ್ಥಾನಗಳ ಉಸ್ತುವಾರಿ ಮತ್ತು ರಕ್ಷಣಾ ಕಾರ್ಯಗಳಿಗಾಗಿ ಖರ್ಚಾಗಿರುವ ಮೊತ್ತವೆಷ್ಟು? (ಪ್ರತಿ ದೇವಸ್ಥಾನದ ವಿವರ ನೀಡುವುದು)